ಕರ್ನಾಟಕ ಸರ್ಕಾರ

# ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ

(ಕರ್ನಾಟಕ ಸರ್ಕಾರದ ಅಂಗ ಸಂಸ್ಥೆ)

Government of Karnataka

## Karnataka Residential Educational Institutions Socie

(An Organisation of Govt. of Karnataka)

**ಸಂಖ್ಯೆ: KREIS/EDN/ENT/4/2022-EDU/E-40396** **ದಿ:15.07.2023**

**ಅಧಿಕೃತ ಜ್ಞಾಪನ**

**ವಿಷಯ:** 2023-24ನೇ ಶೈಕ್ಷಣಿಕ ಸಾಲಿನ 6 ನೇ ತರಗತಿಗೆ ಖಾಲಿ ಉಳಿದ ಸೀಟುಗಳಿಗೆ ವಿದ್ಯಾರ್ಥಿಗಳನ್ನು ದಾಖಲಾತಿ ಮಾಡಿಕೊಳ್ಳುವ ಬಗ್ಗೆ.

**ಉಲ್ಲೇಖ :** 1.ಸರ್ಕಾರಿ ಆದೇಶ ಸಂಖ್ಯೆ:ಸಕಇ 94 ಮೊದೇಶಾ 2020,ಬೆಂಗಳೂರು ದಿ:19.06.2021 ಮತ್ತು ದಿ:12.11.2021

2.ಕರ್ನಾಟಕ ಪರೀಕ್ಷಾ ಪ್ರಾಧಿಕಾರದವರ ಪತ್ರ ಸಂಖ್ಯೆ:ಇಡಿ/ಕೆಇಎ/ಆಡಳಿತ/ಸಿಆರ್-11/2022-23 ದಿ:08.07.2023

3. ಸರ್ಕಾರದ ಆದೇಶ ಸಂಖ್ಯೆ:ಸಕಇ 399 ಎಂಡಿಎಸ್2022, ದಿನಾಂಕ:03.02.2023 ಮತ್ತು 3.07.2023

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1)ರ ಸರ್ಕಾರದ ಆದೇಶದನ್ವಯ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಿಗೆ 2023-24 ನೇ ಸಾಲಿನ 6 ನೇ ತರಗತಿ ಪ್ರವೇಶಾತಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದವರು ಪ್ರವೇಶ ಪರೀಕ್ಷೆ ನಡೆಸಿ ಅಭ್ಯರ್ಥಿಗಳು ಪ್ರವೇಶ ಪರೀಕ್ಷೆಯಲ್ಲಿ ಪಡೆದ ಅಂಕಗಳು (ಮೆರಿಟ್), ಮೀಸಲಾತಿ ಮತ್ತು ಅವರು ನಮೂದಿಸಿರುವ ವಸತಿ ಶಾಲಾ ಆದ್ಯತೆ ಪರಿಗಣಿಸಿ **Computerized auto selection** ಮೂಲಕ ಸೀಟು ಹಂಚಿಕೆ ಮಾಡಿದ್ದು ಅದರಂತೆ ಮೂರು ಸುತ್ತುಗಳ ದಾಖಲಾತಿ ಪ್ರಕ್ರಿಯೆ ಮುಕ್ತಾಯಗೊಂಡಿದೆ. ಕರ್ನಾಟಕ ಪರೀಕ್ಷಾ ಪ್ರಾಧೀಕಾರದವರು ಉಲ್ಲೇಖ(2)ರ ಪತ್ರದಲ್ಲಿ ತಿಳಿಸಿದಂತೆ ಪ್ರವೇಶ ಪರೀಕ್ಷೆಗೆ ಹಾಜರಾಗಿ ಅಂಕಗಳ ಆಧಾರದ ಮೇಲೆ Rank ನಿಗಧಿಯಾಗಿ ಸೀಟು ಹಂಚಿಕೆಯಾಗದ ಅಭ್ಯರ್ಥಿಗಳ ಸಂಪೂರ್ಣ ಮಾಹಿತಿಯನ್ನು ಈ ಪತ್ರದೊಂದಿಗೆ ಲಗತ್ತಿಸಿದೆ.

ಉಲ್ಲೇಖ(1)ರ ಸರ್ಕಾರದ ಆದೇಶದಂತೆ ಖಾಲಿ ಉಳಿದಿರುವ ವರ್ಗ ಹಾಗೂ ಲಿಂಗವಾರು ಸ್ಥಾನಗಳಿಗೆ ಅನುಗುಣವಾಗಿ ಆಯಾ ವರ್ಗದ ಪಟ್ಟಿಯಲ್ಲಿರುವ ಅಭ್ಯರ್ಥಿಗಳನ್ನು ಮಾತ್ರ ಆಯ್ಕೆಗೆ ಪರಿಗಣಿಸಿ ಮೀಸಲಾತಿ ಹಾಗೂ ಮೆರಿಟ್ ಆಧಾರದ ಮೇಲೆ ಈ ಕೆಳಕಂಡ ಷರತ್ತುಗಳನ್ನು **ಕ್ರಮಾನುಸಾರ** ಕಟ್ಟುನಿಟ್ಟಾಗಿ ಪಾಲನೆ ಮಾಡಿ ದಾಖಲಾತಿ ಮಾಡಿಕೊಳ್ಳಲು ಸೂಚಿಸಿದೆ.

1. 3ನೇ ಸುತ್ತಿನ ಫಲಿತಾಂಶದಲ್ಲಿ **ಏಕಲವ್ಯ ಮಾದರಿ ವಸತಿ ಶಾಲೆಗಳಿಗೆ ಸೀಟುಗಳನ್ನು ಹಂಚಿಕೆ ಮಾಡಲಾಗಿದ್ದು ಪರಿಶಿಷ್ಟ ವರ್ಗ ಹೊರತುಪಡಿಸಿ ಇತರೆ ಅಭ್ಯರ್ಥಿಗಳಿಗೆ ಆದ್ಯತೆಯ ಮೇಲೆ ಪರಿಗಣಿಸಿ** ನಿಯಮಾನುಸಾರ ಇತರೆ ವಸತಿ ಶಾಲೆಗಳಲ್ಲಿ ದಾಖಲಾತಿ ನೀಡುವುದು.
2. ಈಗಾಗಲೇ ಹಿಂದಿನ ಸುತ್ತಿನಲ್ಲಿ ಆಯ್ಕೆಯಾಗಿ ಅನಿವಾರ್ಯ/ತಾಂತ್ರಿಕ ಕಾರಣಗಳಿಂದ ದಾಖಲಾತಿ ಮಾಡಿಕೊಳ್ಳದ ಅಭ್ಯರ್ಥಿಗಳು ಲಭ್ಯವಿದ್ದಲ್ಲಿ ಅವರಿಗೆ ಆದ್ಯತೆ ನೀಡುವುದು.
3. **ಆಯಾ ವಸತಿ ಶಾಲೆಯಲ್ಲಿ ಮೀಸಲಾತಿಯನ್ವಯ ಕೊರತೆವಿರುವ ಪ್ರವರ್ಗದ ವಿದ್ಯಾರ್ಥಿ/ ವಿದ್ಯಾರ್ಥಿನಿಗೆ ಸೀಟು ಹಂಚಿಕೆ ಮಾಡತಕ್ಕದು.**
4. ಲಗತ್ತಿಸಿರುವ ಪಟ್ಟಿಯಲ್ಲಿರುವ ವಿಶೇಷ ವರ್ಗದ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡುವುದು.

. 8, ಎಂ.ಎಸ್.ಬಿ–1,6 & 7ನೇ ಮಹಡಿ, ಕನ್ನಿಂಗ್‌ಹ್ಯಾಮ್ ರಸ್ತೆ, ಬೆಂಗಳೂರು – 560052. ದೂರವಾಣಿ : 080-22283366, 22265755, 22204466, 22207722, ಟೆಲಿಫ್ಯಾಕ್ಸ್ : 080-2226228
8, M.S.B-1, 6th & 7th Floor, Cunningham Road, Bengaluru - 560052. Phone : 080-22283366, 22265755, 22204466, 22207722, Telefax : 080-2226228
E-mail : edkreis@rediff.com, Website : www.kreis.kar.nic.in

CamScanner

5. ಉಲ್ಲೇಖ(1)ರ ಸರ್ಕಾರದ ಆದೇಶದಂತೆ ಸಂಘದ ಅಡಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಲ್ಲಿ ಕೋವಿಡ್-19 ರ ಸಾಂಕ್ರಾಮಿಕ ರೋಗದಿಂದ ಮೃತಪಟ್ಟ ಪೋಷಕರ ಮಕ್ಕಳಿಗೆ ಮತ್ತು ಆತ್ಮಹತ್ಯೆ ಮಾಡಿಕೊಂಡ ರೈತ ಕುಟುಂಬದ ಮಕ್ಕಳಿಗೆ ರಾಜ್ಯದ ಯಾವುದೇ ವಸತಿ ಶಾಲೆಯಲ್ಲಿ ಖಾಲಿ ಇರುವ ಸ್ಥಾನಕ್ಕೆ ಲಿಂಗ, ವರ್ಗ/ಆರ್ಥಿಕ ಮಿತಿಯನ್ನು ಪರಿಗಣಿಸದೆ ನೇರವಾಗಿ ಪ್ರವೇಶ ಕಲ್ಪಿಸುವುದು.
6. ಉಲ್ಲೇಖ(1)ರ ಸರ್ಕಾರದ ಆದೇಶದಂತೆ ಅಲೆಮಾರಿ ವಸತಿ ಶಾಲೆಗೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಘೋಷಿಸಿರುವ ಅಲೆಮಾರಿ ವರ್ಗದ ಅಭ್ಯರ್ಥಿಗಳಿಗೆ ಶೇಕಡ ನೂರರಷ್ಟು ಪ್ರವೇಶ ಕಲ್ಪಿಸುವುದು.
7. **National Education Society for Tribal Students(NESTS) ಮಾರ್ಗಸೂಚಿಯಂತೆ ಏಕಲವ್ಯ ಮಾದರಿ ವಸತಿ ಶಾಲೆಗಳಿಗೆ ಶೇಕಡಾ 90%ರಷ್ಟು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶ ಅವಕಾಶ ಕಲ್ಪಿಸುವುದು.**
8. ಆಯಾ ವರ್ಗಕ್ಕೆ ಸೇರಿದ ಅಭ್ಯರ್ಥಿಗಳು ದೊರೆಯದಿದ್ದರೆ ಉಲ್ಲೇಖಿತ ಸರ್ಕಾರ ಕ್ರ.ಸಂ: 10 ರ ವಿಧಾನವನ್ನು ಅನುಸರಿಸುವುದು (ಏಕಲವ್ಯ ಮಾದರಿ ವಸತಿ ಶಾಲೆಗಳಿಗೆ ಮತ್ತು ಅಲೆಮಾರಿ ವಸತಿ ಶಾಲೆಗಳಿಗೆ ಅನ್ವಯಿಸುವುದಿಲ್ಲ)
9. ದಾಖಲಾತಿ ಮಾಡಿಕೊಂಡ ವಿದ್ಯಾರ್ಥಿಗಳು ಅನಿವಾರ್ಯ ಕಾರಣಗಳಿಂದ ವರ್ಗಾವಣೆ ಕೋರಿದ್ದಲ್ಲಿ ಅದೇ ವರ್ಗ ಹಾಗೂ ಲಿಂಗವಾರು ಸ್ಥಾನಗಳು ಲಭ್ಯವಿದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ವರ್ಗಾವಣೆಗೆ ಅವಕಾಶ ಕಲ್ಪಿಸುವುದು.

ಮೇಲ್ಕಂಡಂತೆ ಕ್ರಮವಹಿಸಿದ ತರುವಾಯವೂ ಉಲ್ಲೇಖ(1)ರ ಸರ್ಕಾರದ ಆದೇಶದಂತೆ ಸೀಟು ಲಭ್ಯತೆಗೆ ಅನುಗುಣವಾಗಿ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಲಭ್ಯವಿಲ್ಲದೆ ಸೀಟುಗಳು ಖಾಲಿ ಉಳಿದರೆ ಮಾತ್ರ ಸಂಬಂಧಿಸಿದ ಜಿಲ್ಲಾ ಉಪ/ಜಂಟಿ ನಿರ್ದೇಶಕರು ಸ್ಥಳೀಯವಾಗಿ ಅರ್ಜಿ ಆಹ್ವಾನಿಸಿ ಪ್ರವೇಶಕ್ಕೆ ಅವಕಾಶ ಕಲ್ಪಿಸುವುದು.

ಉಲ್ಲೇಖ(3) ರಲ್ಲಿ 2022-23 ನೇ ಸಾಲಿನಲ್ಲಿ ಸಂಘದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಲ್ಲಿ 6ನೇ ತರಗತಿಗೆ ಪ್ರವೇಶ ಪರೀಕ್ಷೆಯಿಂದ ವಿನಾಯಿತಿ ಇರುವ ಪೌರ ಕಾರ್ಮಿಕರ/ಸಫಾಯಿ ಕರ್ಮಚಾರಿ/ಮ್ಯಾನ್ಯುಯಲ್ ಸ್ಕ್ಯಾವೆಂಜರ್/ಸ್ಮಶಾನ ಕಾರ್ಮಿಕರ/ ದೇವದಾಸಿ/ಅಲೆಮಾರಿ/ಅರೆ ಅಲೆಮಾರಿ ಸಮುದಾಯಗಳಿಗೆ ನಿಗದಿಪಡಿಸಿರುವ ಎಲ್ಲಾ ಸ್ಥಾನಗಳನ್ನು ಪೂರ್ಣ ಪ್ರಮಾಣದಲ್ಲಿ ಭರ್ತಿ ಮಾಡಲು ಜಿಲ್ಲಾ ಮತ್ತು ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಸ್ಥಳೀಯವಾಗಿ ವ್ಯಾಪಕ ಪ್ರಚಾರ ನೀಡಿ, ಶಿಕ್ಷಣದ ಅರಿವು ಮೂಡಿಸಲು ವಿಶೇಷ ದಾಖಲಾತಿ ಆಂದೋಲನ ನಡೆಸಿ, **ಸದರಿ ವರ್ಗದ ವಿದ್ಯಾರ್ಥಿಗಳಿಗೆ ನಿಗದಿಪಡಿಸಿರುವ ಎಲ್ಲಾ ಸ್ಥಾನಗಳನ್ನು ಪೂರ್ಣ ಪ್ರಮಾಣದಲ್ಲಿ ಭರ್ತಿ ಮಾಡಲು ಕಡ್ಡಾಯವಾಗಿ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದೆ.**

ಸದರಿ ಸೀಟು ಹಂಚಿಕೆ ಪ್ರಕ್ರಿಯೆಯನ್ನು ಅತ್ಯಂತ ಪಾರದರ್ಶಕವಾಗಿ ಹಾಗೂ ದೂರುಗಳಿಗೆ ಆಸ್ಪದ ಕೊಡದ ಮೇಲ್ಕಂಡ ಅಂಶಗಳಂತೆ ಕ್ರಮ ವಹಿಸಿ, ದಿನಾಂಕ 31.07.2023 ರೊಳಗೆ ದಾಖಲಾತಿ ಮಾಡಿಕೊಂಡು, ಅರ್ಹ ವಿದ್ಯಾರ್ಥಿಗಳು ದಾಖಲಾತಿಯಾದ ಕೂಡಲೇ **SATS ನಲ್ಲಿ ಕಡ್ಡಾಯವಾಗಿ ದಾಖಲಿಸಲು(IN) ಮಾಡಲು ಸೂಚಿಸಿದೆ. ಈ ಕುರಿತು** ಕೈಗೊಂಡ ಕ್ರಮದ ಬಗ್ಗೆ ಕಡ್ಡಾಯವಾಗಿ ವರದಿಯನ್ನು ಈ ಕಛೇರಿಗೆ ಸಲ್ಲಿಸಲು ಸೂಚಿಸಿದೆ.

**ಕಾರ್ಯನಿರ್ವಾಹಕ ನಿರ್ದೇಶಕರು**

__ಇವರಿಗೆ :-__

1. ಎಲ್ಲಾ ಜಿಲ್ಲೆಗಳ ಜಂಟಿ/ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ,
2. ಎಲ್ಲಾ ಜಿಲ್ಲೆಗಳ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,

CS CamScanner

3. ಎಲ್ಲಾ ಜಿಲ್ಲೆಗಳ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು.

**ಪ್ರತಿಯನ್ನು ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ:-**

1. ಸಂಘದ ಅಧೀನದ ಎಲ್ಲಾ ವಸತಿ ಶಾಲೆಗಳ ಪ್ರಾಂಶುಪಾಲರುಗಳು, ತಮ್ಮ ವಸತಿ ಶಾಲೆಯ SMS login ನಲ್ಲಿ ದಾಖಲಾತಿಯಾದ ಕೂಡಲೇ Update ಮಾಡತಕ್ಕದ್ದು. SATS ನಲ್ಲಿ ಕಡ್ಡಾಯವಾಗಿ IN ಮಾಡಲು ಸೂಚಿಸಿದೆ.
2. ಎಲ್ಲಾ ಜಿಲ್ಲೆಗಳ ಜಿಲ್ಲಾ ಸಮನ್ವಯ ಅಧಿಕಾರಿಗಳು, ಆಯಾ ವಸತಿ ಶಾಲೆಯ SMS login ಮತ್ತು DIA login ನಲ್ಲಿ ದಾಖಲಾತಿಯಾದ ಕೂಡಲೇ Update ಮಾಡಲು ಅಗತ್ಯ ಕ್ರಮ ವಹಿಸುವುದು.

**ಗೌರವ ಪೂರ್ವಕವಾಗಿ ಪ್ರತಿಯನ್ನು ಸಲ್ಲಿಸಿದೆ:-**

1. ಮಾನ್ಯ ಸಮಾಜ ಕಲ್ಯಾಣ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ, ಸದರಿ ವಿಷಯವನ್ನು ಮಾನ್ಯ ಸಚಿವರ ಅವಗಾಹನೆಗೆ ತರಲು ಕೋರಿದೆ.
2. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ, ಸದರಿ ವಿಷಯವನ್ನು ಮಾನ್ಯ ಸಚಿವರ ಅವಗಾಹನೆಗೆ ತರಲು ಕೋರಿದೆ.
3. ಮಾನ್ಯ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ, ಸದರಿ ವಿಷಯವನ್ನು ಮಾನ್ಯ ಸಚಿವರ ಅವಗಾಹನೆಗೆ ತರಲು ಕೋರಿದೆ.
4. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು
5. ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು
6. ಮಾನ್ಯ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
7. ಮಾನ್ಯ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು
8. ಮಾನ್ಯ ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ. ಬೆಂಗಳೂರು

CamScanner